ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 71 ಸಿಎಲ್‌ಸಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಡಾ|| ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು,ದಿನಾಂಕ:06/10/2025

ಇವರಿಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ, ವಿಕಾಸಸೌಧ,
ಬೆಂಗಳೂರು-01.

ಇವರಿಗೆ,

ಆಯುಕ್ತರು,
ಕಾರ್ಮಿಕ ಇಲಾಖೆ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.

ಮಾನ್ಯರೇ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ/ಅರೆ ಸರ್ಕಾರಿ/ಸೇವಾ ಸಂಸ್ಥೆಗಳ ಕಟ್ಟಡಗಳ ಮೇಲೂ ಮಕ್ಕಳ ಸಹಾಯವಾಣಿ 1098 ಅನ್ನು ಕಡ್ಡಾಯವಾಗಿ ಬರೆಸಲು ಸೂಕ್ತ ನಿರ್ದೇಶನ ನೀಡುವ ಬಗ್ಗೆ.

ಉಲ್ಲೇಖ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಇವರ ಪತ್ರ ದಿನಾಂಕ: 26/08/2025.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರ ಹಾಗೂ ಅಡಕಗಳನ್ನು ಇದರೊಂದಿಗೆ ಲಗತ್ತಿಸಲಾಗಿದೆ. ಸದರಿ ಪತ್ರದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಇವರು ರಾಜ್ಯದ ಎಲ್ಲಾ ಸರ್ಕಾರಿ, ಅರೆ ಸರ್ಕಾರಿ, ಶೈಕ್ಷಣಿಕ ಸಂಸ್ಥೆಗಳು, ಖಾಸಗಿ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೂ **ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅನ್ನು** ಕಡ್ಡಾಯವಾಗಿ ಶಾಶ್ವತ ಫಲಕದಲ್ಲಿ ಪ್ರದರ್ಶಿಸುವಂತೆ ಕೋರಿರುವ ಬಗ್ಗೆ, ಸೂಕ್ತ ಕ್ರಮವಹಿಸಿ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಶಶಿ)
ಉಪ ವಿಶೇಷಾಧಿಕಾರಿ
ಬಾಲಕಾರ್ಮಿಕ ಕೋಶ
ಕಾರ್ಮಿಕ ಇಲಾಖೆ.

# ಚೈಲ್ಡ್ ಲೈನ್ (ಮಕ್ಕಳ ಸಹಾಯವಾಣಿ):

18 ವರ್ಷದೊಳಗಿನ ಮಕ್ಕಳು ಯಾವುದೇ ರೀತಿಯ ಸಂಕಷ್ಟ, ತೊಂದರೆ, ದೈಹಿಕ/ಮಾನಸಿಕ ಶಿಕ್ಷೆ, ಹಿಂಸೆ/ನಿರ್ಲಕ್ಷ್ಯ/ ತಾರತಮ್ಯ ಹಾಗೂ ಲೈಂಗಿಕ ಆಧಾರಿತ ಯಾವುದೇ ರೀತಿಯ ಶೋಷಣೆಗೆ ಒಳಗಾದರೆ ತಕ್ಷಣ

## ಚೈಲ್ಡ್ ಲೈನ್‌ಗೆ ಕರೆ ಮಾಡಿ: 1098 ಅಥವಾ 112.

ಯಾವುದೇ ಮಕ್ಕಳು ಓಡಿಹೋದರೆ, ಕಾಣೆಯಾದರೆ, ಕಳ್ಳ ಸಾಗಾಣಿಕೆಗೆ ಒಳಪಟ್ಟರೆ, ದೌರ್ಜನ್ಯಕ್ಕೊಳಗಾದರೆ, ಜೀತ ಪದ್ಧತಿಯಲ್ಲಿದ್ದರೆ, ಬಾಲ ಮತ್ತು ಕಿಶೋರ ಕಾರ್ಮಿಕ ಪದ್ಧತಿಯಲ್ಲಿದ್ದರೆ, ಬಾಲ್ಯ ವಿವಾಹದ ಸಿದ್ಧತೆ ಅಥವಾ ಬಾಲ್ಯ ವಿವಾಹ ನಡೆಸಿದಲ್ಲಿ, ಭಿಕ್ಷಾಟನೆಯಲ್ಲಿದ್ದರೆ, ಬೀದಿಯಲ್ಲಿದ್ದರೆ, ನಿರಂತರ ಶಾಲೆಗೆ ಗೈರು ಹಾಜರಾದರೆ, ಯಾವುದೇ ವಿಪತ್ತಿಗೆ ಒಳಗಾದರೆ, ಮಾದಕ ವ್ಯಸನ, ಆನ್ ಲೈನ್ ಬೆದರಿಕೆ, ಜಾಲತಾಣ ಸಮಸ್ಯೆ, ಪೋಷಣೆ ಮತ್ತು ರಕ್ಷಣೆಯ ಅಗತ್ಯವಿದ್ದರೆ, ಹಾಗೂ ಕಾನೂನಿನೊಂದಿಗೆ ಸಂಘರ್ಷಕ್ಕೆ ಒಳಗಾದರೆ ಅವರ ಸಂರಕ್ಷಣೆಗಾಗಿ

## ತಕ್ಷಣ ಕರೆ ಮಾಡಿ; 1098. ತುರ್ತು ರಕ್ಷಣೆಗಾಗಿ 112

**(ಈ ದೂರವಾಣಿ ಉಚಿತ ಹಾಗೂ ದೂರು ನೀಡಿದವರ ವಿವರ ಖಂಡಿತ ಬಹಿರಂಗವಾಗುವುದಿಲ್ಲ, ಗೌಪ್ಯತೆಯನ್ನು ಕಾಪಾಡಲಾಗುವುದು).**

<u>ಹೆಚ್ಚಿನ ಮಾಹಿತಿ ಮತ್ತು ದೂರು ನೀಡಲು ಇವರನ್ನು ಸಂಪರ್ಕಿಸಿ:</u>

ಜಿಲ್ಲಾ ಮಕ್ಕಳ ರಕ್ಷಣಾ ಘಟಕ:_______________ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ:_____

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ:_______________

ಹಿರಿಯ ಮಕ್ಕಳ ಕಲ್ಯಾಣ ಪೊಲೀಸ್ ಅಧಿಕಾರಿ:_______________

ತಾಲೂಕು ಮಕ್ಕಳ ರಕ್ಷಣಾಧಿಕಾರಿ (ಶಿಶು ಅಭಿವೃದ್ಧಿ ಯೋಜನಾಧಿಕಾರಿ):_______

ತಾಲೂಕು ಕಾನೂನು ಸೇವಾ ಪ್ರಾಧಿಕಾರ:_______________

ಸಖಿ (ಮಹಿಳಾ ಸಹಾಯವಾಣಿ (ಸಾಂತ್ವನ) ಕೇಂದ್ರ):_______________

**ಮುಖ್ಯೋಪಾಧ್ಯಯರು/ಕಾಲೇಜ್ ಪ್ರಾಂಶುಪಾಲರು/ನಿಲಯ ಪಾಲಕರು/ ಮೆಲ್ವೀಚಾರಕರು/ಮುಖ್ಯಸ್ಥರು/ಆಡಳಿತ ಮಂಡಳಿ.**
**ಶಿಕ್ಷಣ ಸಂಸ್ಥೆಯ/ಇಲಾಖೆಯ ಹೆಸರು:**_______________________________

---

***<u>ಸೂಚನೆ:</u>*** **1. ಮೇಲಿನಂತೆ ಮಕ್ಕಳ ಸಹಾಯವಾಣಿ 1098 ಅಥವಾ 112 ಶಾಶ್ವತ ಫಲಕವನ್ನು ಎಲ್ಲಾ ಶಾಲೆ/ವಸತಿನಿಲಯ/ಶಿಕ್ಷಣ ಸಂಸ್ಥೆ/ಪದವಿ ಪೂರ್ವ ಕಾಲೇಜ್/ ಪದವಿ ಕಾಲೇಜ್/ಅಂಗನವಾಡಿ/ಎಲ್ಲಾ ಸರಕಾರಿ/ವಿವಿಧ ಇಲಾಖೆಗಳ ಅಥವಾ ಅರೆ ಸರಕಾರಿ ಕಛೇರಿಗಳ ಮುಂಭಾಗದಲ್ಲಿ ಎಲ್ಲಾ ಸಾರ್ವಜನಿಕರಿಗೆ/ಮಕ್ಕಳಿಗೆ ಕಾಣುವಂತೆ ಟಿನ್‌ನ ಬೋರ್ಡ್‌ನಲ್ಲಿ/ ಅಥವಾ ಕಟ್ಟಡದ ಗೋಡೆಯಲ್ಲಿ ಶಾಶ್ವತವಾಗಿ ಎಲ್.ಎಮ್.ಎಲ್ ಬಣ್ಣದಲ್ಲಿ ಬರೆಸಬೇಕು.**

**2. ಮೇಲಿನ ಇಲಾಖೆಗಳ ದೂರವಾಣಿ ಸಂಖ್ಯೆಗಳನ್ನು ನಿಮ್ಮ ಜಿಲ್ಲಾ ವ್ಯಾಪ್ತಿಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿಯಿಂದ ಪಡೆಯುವುದು.**